ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 26–10–2021**

# ಮಾಧ್ಯಮ ಆಹ್ವಾನ
## MEDIA INVITATION

**ಸುದ್ದಿಗೋಷ್ಠಿಗೆ ಆಹ್ವಾನ**

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವರಾದ ಭಗವಂತ ಖೂಬಾ ಅವರಿಂದ

ದಿನಾಂಕ : 27–10–2021, ಬುಧವಾರ, ಸಮಯ: ಅಪರಾಹ್ನ 12.30 ಗಂಟೆಗೆ

ಸ್ಥಳ: ಕೊಠಡಿ ಸಂ 222, ಎರಡನೇ ಮಹಡಿ, ವಿಕಾಸಸೌಧ, ಬೆಂಗಳೂರು

**ಮಾಧ್ಯಮ ಮಿತ್ರರ ಗಮನಕ್ಕೆ :**

2022–23ನೇ ಸಾಲಿಗೆ ಮಾಧ್ಯಮ ಮಾನ್ಯತಾ (Accreditation ) ಕಾರ್ಡು ಹಾಗೂ ಕೆ.ಎಸ್.ಆರ್.ಟಿ.ಸಿ ಸ್ಮಾರ್ಟ್ (Smart Card) ಕಾರ್ಡುಗಳನ್ನು ನವೀಕರಿಸಲು ಅರ್ಜಿ ನಮೂನೆಗಳನ್ನು ದಿನಾಂಕ: 26–10–2021ರಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ವಿತರಿಸಲಾಗುತ್ತಿದೆ. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ : 15–11–2021ರೊಳಗಾಗಿ ಸಲ್ಲಿಸುವುದು.

# ಪತ್ರಿಕಾ ಪ್ರಕಟಣೆ
## PRESS RELEASE

## ಜಾಗೃತಿ ಅರಿವು ಸಪ್ತಾಹ – 2021

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ):

ಭ್ರಷ್ಟಾಚಾರದ ವಿರುದ್ದ ಜಾಗೃತಿ ಮೂಡಿಸಲು “ಜಾಗೃತಿ ಅರಿವು ಸಪ್ತಾಹ – 2021”ನ್ನು (Vigilance Awareness Week - 2021) ದಿನಾಂಕ: 26–10–2021 ರಿಂದ 01–11–2021ರ ವರೆಗೆ ಆಚರಿಸಲಾಗುತ್ತಿದೆ. ಇಂದು ವಿಧಾನಸೌಧದ ಸಮ್ಮೇಳ ಸಭಾಂಗಣದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಪಿ. ರವಿಕುಮಾರ್ ಅವರು ಸಚಿವಾಲಯದ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ಪ್ರತಿಜ್ಞಾ ವಿಧಿ ಭೋಧಿಸಿದರು.

ಈ ವರ್ಷದ ಜಾಗೃತಿ ಅರಿವು ಸಪ್ತಾಹದ ವಿಷಯವು “Independent India@75:self reliance with Integrity” ಆಗಿರುತ್ತದೆ. ಈ ಜಾಗೃತಿ ಅರಿವಿನ ಸಪ್ತಾಹವನ್ನು ಪರಿಣಾಮಕಾರಿಯಾಗಿ ಆಚರಿಸಲು ಮುಖ್ಯ ಕಾರ್ಯದರ್ಶಿಗಳು ಈ ಸಂದರ್ಭದಲ್ಲಿ ಕರೆ ನೀಡಿದರು.

ಇದೇ ಸಮಯದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸ್ಮಧಾರಣಾ ಇಲಾಖೆಯ ಕಾರ್ಯದರ್ಶಿಗಳಾದ ಪಿ. ಹೇಮಲತಾ ಸೇದಿದಂತೆ ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿದರು.

## ಟೆಂಡರ್ ಕಂ ಬಹಿರಂಗ ಹರಾಜು

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ):

ಗೃಹರಕ್ಷಕ ಮತ್ತು ಪೌರ ರಕ್ಷಣಾ ನಿರ್ದೇಶನಾಲಯದಲ್ಲಿನ ಹಳೆಯ ನಿಷ್ಪ್ರಯೋಜಕ ವಾಹನಗಳನ್ನು (10 ಟಿವಿಎಸ್ ಫಿಯರೋ ದ್ವಿಚಕ್ರವಾಹಗಳು, 01 ಹೀರೋ ಹೋಂಡಾ ದ್ವಿಚಕ್ರ ವಾಹನ, 01 ಮಾರುತಿ ಒಮ್ನಿ, ನಾಲ್ಕುಚಕ್ರ ವಾಹನ) ದಿನಾಂಕ: 09-11-2021ರಂದು ಗೃಹರಕ್ಷಕ ಮತ್ತು ಪೌರ ರಕ್ಷಣಾ ನಿರ್ದೇಶನಾಲಯ, ನಂ.1, ಅಣ್ಣಸ್ವಾಮಿ ಮೊದಲಿಯಾರ್ ರಸ್ತೆ, ಬೆಂಗಳೂರು -560 042 ಇಲ್ಲಿ ಟೆಂಡರ್ ಕಂ ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲಾಗುತ್ತಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಗೃಹರಕ್ಷಕ ಮತ್ತು ರಕ್ಷಣಾ ನಿರ್ದೇಶನಲಯ, ನಂ1, ಅಣ್ಣಸ್ವಾಮಿ ಮೊದಲಿಯರ್ ರಸ್ತೆ, ಬೆಂಗಳೂರು ಇವರ ಕಚೇರಿಯನ್ನು ಸಂಪರ್ಕಿಸುವುದು.

## ಉರ್ದು ಭಾಷಾ ಶಿಕ್ಷಕರ ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 19-11-2018ರಂದು ಅಧಿಸೂಚಿಸಲಾದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿನ ಉರ್ದು ಭಾಷಾ ಶಿಕ್ಷಕರು (RPC 79) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಆಯೋಗದ ಅಂತರ್ಜಾಲ http://kpsc.kar.nic.in/finallist ನಲ್ಲಿ ಪ್ರಕಟಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 2021-22ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ):

2021-22ನೇ ಸಾಲಿಗೆ 1 ರಿಂದ 10ನೇ ತರಗತಿಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಹಾಗೂ ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಪೋಷಕರ ಮಕ್ಕಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಈ ಯೋಜನೆಯಡಿ 2020-21ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನಲ್ಲಿ ಅರ್ಜಿ ಸಲ್ಲಿಸುವಂತಿಲ್ಲ. 2021-22ನೇ ಸಾಲಿನ ಹೊಸ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ವಿದ್ಯಾರ್ಥಿಯ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ - ಐಡಿ, ಸಂಬಂಧಪಟ್ಟ ಶಾಲೆಗಳಿಂದ ಪಡೆದು ಪೋಷಕರ ಮೊಬೈಲ್ ಸಂಖ್ಯೆ, ಆಧಾರ್ ಸಂಖ್ಯೆ ಹಾಗೂ ಆಧಾರ್ ಕಾರ್ಡಿನಲ್ಲಿ ನಮೂದಿಸಿರುವಂತೆ ಹೆಸರನ್ನು ಬರೆಯಬೇಕು.

ಪೋಷಕರ ಆದಾಯಮಿತಿ: 1 ರಿಂದ 8ನೇ ತರಗತಿಯ ವಿದ್ಯಾರ್ಥಿಯ ಪೋಷಕರ ಕುಟುಂಬದ ವಾರ್ಷಿಕ ಆದಾಯ ರೂ 6.00 ಲಕ್ಷಗಳ ಒಳಗಿರಬೇಕು. 9ರಿಂದ 10ನೇ ತರಗತಿಯ ವಿದ್ಯಾರ್ಥಿಯ ಪೋಷಕರ ಕುಟುಂಬದ ವಾರ್ಷಿಕ ಆದಾಯ ರೂ. 2.5 ಲಕ್ಷಗಳ ಒಳಗಿರಬೇಕು.

ವಿದ್ಯಾರ್ಥಿ ವೇತನ ಮಾಹಿತಿಗಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ http://ssp.karnataka.gov.in/ ನ್ನು ಪರಿಶೀಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ sw.kar.nic.in ನ್ನು ಅಥವಾ ಕಚೇರಿ ಅವಧಿಯಲ್ಲಿ ದೂರವಾಣಿ ಸಂಖ್ಯೆ 080–27859557ನ್ನು ಸಂಪರ್ಕಿಸಬಹುದಾಗಿದೆ.

## ಬೆಂಗಳೂರು ಜಲ ಮಂಡಳಿಯಿಂದ ನೀರಿನ ಅದಾಲತ್

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ):

ಬೆಂಗಳೂರು ಜಲಮಂಡಳಿಯು ದಿನಾಂಕ:28.10.2021 ಗುರುವಾರ ದಂದು **(ದಕ್ಷಿಣ ವಿಲೇಜ್)–2, (ಆಗ್ನೇಯ–5), (ಪಶ್ಚಿಮ ವಿಲೇಜ್)–1, (ನೈರುತ್ಯ)–4, (ಪೂರ್ವ ವಿಲೇಜ್–3), (ಪೂರ್ವ ವಿಲೇಜ್–1), (ವಾಯುವ್ಯ–5), (ಈಶಾನ್ಯ–3) ಮತ್ತು (ಉತ್ತರ–1)** ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್‌ಅನ್ನು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸುತ್ತಿದ್ದು, ಅದಾಲತ್ ನಡೆಯುವ ಸ್ಥಳಗಳ ವಿವರ ಈ ಕೆಳಗಿನಂತಿದೆ.

| **ಉಪವಿಭಾಗದ ಹೆಸರು** | **ವಿಳಾಸ** | **ಸೇವಾಠಾಣೆಗಳು** | **ದೂರವಾಣಿ ಸಂಖ್ಯೆ** |
|---|---|---|---|
| (ದಕ್ಷಿಣ ವಿಲೇಜ್)–2 | ಸೆಂಟ್ರಲ್ ಜೈಲು ರಸ್ತೆ, ಕೂಡ್ಲು ಜಿ ಎಲ್ ಆರ್, ಕೂಡ್ಲು, ಬೆಂಗಳೂರು | ಕೂಡ್ಲು, ಬೇಗೂರು | 9845444090 |
| (ಆಗ್ನೇಯ –5) | ಕಪಿಲ ಭವನ, 1ನೇ ಮಹಡಿ, 4ನೇ ಟಿ ಬ್ಲಾಕ್, ಜಯನಗರ, ಬೆಂಗಳೂರು–41 | ಜೆ.ಪಿ.ನಗರ–1 &3, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಭೈರಸಂದ್ರ | 7975173499 |
| (ಪಶ್ಚಿಮ ವಿಲೇಜ್)–1 | 4ನೇ ಬ್ಲಾಕ್, ಬಿ.ಎಸ್.ಕೆ 6ನೇ ಹಂತ, ಪವನಪುರ, ರಾಘವೇಂದ್ರ ಸ್ವಾಮಿ ದೇವಸ್ಥಾನದ ಮುಂಭಾಗ, ಲಿಂಗಧೀರನಹಳ್ಳಿ, ಬೆಂಗಳೂರು–62 | ಲಿಂಗಧೀರನಹಳ್ಳಿ, ಹೆಮ್ಮಿಗೆಪುರ, ಬನಶಂಕರಿ 6ನೇ ಹಂತ. | 9845444034 |
| (ನೈರುತ್ಯ)–4 | ಮೊದಲನೇ ಮಹಡಿ, ಬನಗಿರಿನಗರ, ವಾಟರ್ ಟ್ಯಾಂಕ್ ಪಕ್ಕ, ಬನಶಂಕರಿ 3ನೇ ಹಂತ, 1ನೇ ಮುಖ್ಯರಸ್ತೆ, ಬೆಂಗಳೂರು–85. | ಬನಗಿರಿನಗರ, ಬಿ.ಎಸ್.ಕೆ –1 &2, ಕುಮಾರಸ್ವಾಮಿ ಲೇಔಟ್, ಇಸ್ರೋ ಲೇಔಟ್, ಪೂರ್ಣ ಪ್ರಜ್ಞಾ ಲೇಔಟ್. | 22945198 |
| (ಪೂರ್ವ ವಿಲೇಜ್–3) | ಸೆಂಟ್ರಲ್ ಜೈಲು ರಸ್ತೆ, ಕೂಡ್ಲು ಜಿ ಎಲ್ ಆರ್, ಕೂಡ್ಲು, ಹೊಸ ರಸ್ತೆ, ಅರಳೂರು, ಬೆಂಗಳೂರು | ಅರಳೂರು, ದೊಡ್ಡ ಕಣ್ಣನಹಳ್ಳಿ, ಕಸವನಹಳ್ಳಿ | 9686566945 |
| (ಪೂರ್ವ ವಿಲೇಜ್–1) | ಬಂಜಾರ ಲೇಔಟ್, ಎಸ್.ಟಿ.ಪಿ ಆವರಣ, ಹೊರಮಾವು, ಬೆಂಗಳೂರು | ಐ.ಎಸ್.ಪಿ.ಎಸ್, ಹೊರಮಾವು, ರಾಜಾಕೆನಲ್ | 9945233444 |
| (ವಾಯುವ್ಯ–5) | ಶ್ರೀರಾಮ ಡಿಲಕ್ಸ್ ಹೋಟೆಲ್ ಹಿಂಭಾಗ, ಪೀಣ್ಯ 2ನೇ ಹಂತ, ಬಿಎಂಟಿಸಿ ಬಸ್ ನಿಲ್ದಾಣದ ಹತ್ತಿರ, ಬೆಂಗಳೂರು–58 | ಪೀಣ್ಯ ದಾಸರಹಳ್ಳಿ, ಪೀಣ್ಯ, ಲಿಂಗಧೀರನಹಳ್ಳಿ, ಅಂದರಹಳ್ಳಿ | 28360030 |

| | | | |
|---|---|---|---|
| (ಈಶಾನ್ಯ –3) | ನಂ.3, ಪಿ&ಟಿ ಕಾಲೋನಿ, ಆರ್.ಟಿ.ನಗರ, ಬೆಂಗಳೂರು–32 | ಆರ್.ಟಿ.ನಗರ, ಕಾವಲ್ ಬೈರಸಂದ್ರ, ಸಂಜಯನಗರ, ಬಿ.ಇ.ಎಲ್ ರಸ್ತೆ, ಗಂಗಾನಗರ, ಆನಂದನಗರ, ಮನೋರಾಯನಪಾಳ್ಯ | 22945139 |
| (ಉತ್ತರ–1) | 8ನೇ ಮುಖ್ಯ ರಸ್ತೆ, 'ಡಿ' ಬ್ಲಾಕ್, ಸಹಕಾರನಗರ, ಬೆಂಗಳೂರು–92 | ಸಹಕಾರನಗರ, ಜಕ್ಕೂರು, ಕೆಂಪಾಪುರ (ಕಾಫಿ ಬೋರ್ಡ್ ಲೇಔಟ್) | 9845444123 |

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ ಸಹಾಯವಾಣಿ 1916 ಹಾಗೂ ವಾಟ್ಸ್ಆಪ್ ಸಂಖ್ಯೆ: 8762228888 ಗೆ ಸಂಪರ್ಕಿಸಬಹುದಾಗಿದೆ. ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಹಾಗೂ ಕೋವಿಡ್–19 ನ ಮರುತೆರವು ಮಾರ್ಗಸೂಚಿಯನ್ವಯ ಸಭೆಗೆ ಹಾಜರಾಗಲಿರುವ ಸಂದರ್ಭದಲ್ಲಿ ಎಲ್ಲಾ ಸುರಕ್ಷತೆಯನ್ನು ಕಾಪಾಡಿಕೊಳ್ಳುವಂತೆ, ಸಾರ್ವಜನಿಕ ಸಂಪರ್ಕಾಧಿಕಾರಿ, ಬೆಂಗಳೂರು ಜಲಮಂಡಲಿ ಇವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## BWSSB – Water Adalath

BWSSB water Adalath is being held on 28.10.2021 in **(South Village-2), (South East-5), (West Village-1), (South West-4), (East Village-3), (East Village-1), (North West-5), (North East-3), and (North-1)** sub divisions from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues. The details of the places where the Adalath will be held is as follows.

| Sub-division | Address | Service Stations | Phone Number |
|---|---|---|---|
| **(South Village-2)** | Central Jail Road, Koodlu GLR, Koodlu, Bangalore. | Koodlu, Begur | 9845444090 |
| **(South East-5)** | Kapila Bhavan, 1st floor, 4th 'T' Block, Jayanagar, Bangalore-41 | JP Nagar -1 &3, Jayanagar 4th 'T' Block, Jayanagar 4th Block, Hombegowda nagar, Byrasandra | 7975173499 |
| **(West Village-1)** | 4th Block, BSK 6th Stage, Pavanapura, Opp Raghavendra Swamy Temple, Lingadheeranahalli, Bangalore-62 | Lingadheeranahalli, Hemmigepura,BSK 6th Stage | 9845444034 |
| **(South West -4)** | 1st floor, Banagiri Nagar, Near Water Tank, Banashankari 3rd Stage, 1st main road, Bangalore-85 | Banagirinagar , BSK-1&2, Kumaraswamy Layout, ISRO layout, Poorna Pragna layout, | 22945198 |

| | | | |
|---|---|---|---|
| **(East Village-3)** | Central Jail Road, Koodlu GLR , Koodlu, New Road, Aralur, Bangalore. | Araluru, Doddakannanahalli, Kasavanahalli | 9686566945 |
| **(East Village-1)** | Banjara Layout, STP Premises, Horamavu, Bangalore. | ISPS, Horamavu , Rajacanal | 9945233444 |
| **(North West-5)** | Behind Sriram Deluxe Hotel, Peenya 2nd Stage, Near BMTC Bus Stop, Bangalore-58 | Peenya Dasarahalli, Peenya, Lingadheeranahalli, Andarahalli | 28360030 |
| **(North East-3)** | No.3, P&T Colony, RT Nagar, Bangalore-32 | RT Nagar, Kaval Byarasandra, Sanjayanagar, BEL Road,Ganganagar, Anand Nagar, Manorayanapalya | 22945139 |
| **(North-1)** | 8th Main Road, 'D' Block, Sahakar Nagar, Bangalore-92 | Sahakar Nagar, Jakkur, Kempapura (Coffee Board Lay out) | 9845444123 |

For any problems regarding the water supply and all, publics can contact helpline number: 1916 & whats app no: 8762228888. Public can utilize this adalath facilities to solve the problems regarding water supply. Public are requested to follow all precautionary measures according to **Covid-19 Re-open** guidelines while attending the adalath.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಠಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 26.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 89 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 91 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 110 | ಸಾಧಾರಣ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 81 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 82 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 111 | ಸಾಧಾರಣ | $PM_{10}$ |

| | | | | |
|---|---|---|---|---|
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 58 | ತೃಪ್ತಿಕರ | CO |
| **(26.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 95 | ತೃಪ್ತಿಕರ | $PM_{2.5}$ |
| 9 | ಪೀಣ್ಯ | 83 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 26.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 89 | Satisfactory | $PM_{10}$ |
| 2 | Jayanagar 5th Block, Shalini ground | 91 | Satisfactory | $PM_{10}$ |
| 3 | KAVIKA, Mysore Road | 110 | Moderate | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 81 | Satisfactory | $PM_{10}$ |
| 5 | HSR Layout, near Central Silkboard | 82 | Satisfactory | $PM_{10}$ |
| 6 | City Railway Station, Magestic, Bengaluru | 111 | Moderate | $PM_{10}$ |
| 7 | Saneguruvanahalli, NisargaBhavan, KSPCB, Shivanagara | 58 | Satisfactory | CO |
| **(26.10.2021 at 10.05 AM)** | | | | |

| | | | | |
|---|---|---|---|---|
| 8 | BWSSB, Kadabesanahalli | 95 | Satisfactory | $PM_{2.5}$ |
| 9 | Peenya | 83 | Satisfactory | $PM_{2.5}$ |
| 10 | BTM Layout | * | * | * |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |